ಕೊಳ್ಳೇಗಾಲ ಮತ್ತು ಯಳಂದೂರು ತಾಲ್ಲೂಕುಗಳಲ್ಲಿ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳ ಕೊರತೆ

1980 (2341) ಶ್ರೀ ನಂಜುಂಡಸ್ವಾಮಿ ಜಿ.ಎಸ್. (ಕೊಳ್ಳೇಗಾಲ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಕೊಳ್ಳೇಗಾಲ ಮತ್ತು ಯಳಂದೂರು ತಾಲ್ಲೂಕುಗಳಲ್ಲಿ ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕೊರತೆಯನ್ನು ನಿವಾರಿಸಲು ಸರ್ಕಾರ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಗ್ರಾಮೀಣಾ ಪ್ರದೇಶಗಳಿಗೆ ವರ್ಗಾವಣೆ

1982 (2651) ಶ್ರೀ ನಾರಾಯಣ ಸ್ವಾಮಿ ಎ. (ಆನೇಕಲ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಕೆಲವು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಗ್ರಾಮೀಣ ಪ್ರದೇಶಗಳಿಗೆ ವರ್ಗಾಯಿಸಲು ಹಿಂದಿನ ಸರ್ಕಾರ ತೀರ್ಮಾನ ಕೈಗೊಂಡಿರುವ ಬಗ್ಗೆ ಸರ್ಕಾರ ಗಮನಕ್ಕೆ ಬಂದಿದೆಯೆ;

ಆ) ಮಂಜೂರಾತಿಯು ನಿರೀಕ್ಷೆಯ ಮೇಲೆ ಪ್ರಾಥಮಿಕ ಆರೋಗ್ಯ ಘಟಕಗಳು ನಿರ್ಮಾಣವಾಗಿ ಅನುಪಯುಕ್ತ ಕಟ್ಟಡಗಳಾಗಿ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಆನೇಕಲ್ ಕ್ಷೇತ್ರದ ಕೆಲವು ಜಾಗಗಳಲ್ಲಿ ಹಿಂದಿನ ತೀರ್ಮಾನದಂತೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ವರ್ಗಾಯಿಸಲು ವಿಳಂಬವೇಕೆ ಈ ಬಗ್ಗೆ ಸರ್ಕಾರದ ಕ್ರಮವೇನು?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಪ್ರಸ್ತಾವನೆ ಸ್ವೀಕರಿಸಿದೆ.

ಆ) ಇಲ್ಲ.

ಇ) ಪ್ರಸ್ತಾವೆಯು ಪರಿಶೀಲನೆಯಲ್ಲಿದೆ.